**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ. ಸಂಖ್ಯೆ: 99/2024**

**ಪಿರ್ಯಾದಿ** ಃ ಶ್ರೀ ಕೆ.ಎಲ್.ಪೂರ್ಣೇಶ,
ಬಿನ್ ದಿಃ ಲಕ್ಷ್ಮಣಗೌಡ,
ವಯಸ್ಸು ಸುಮಾರು 41 ವರ್ಷ,
ವಾಸಃ ಕುನ್ನಹಳ್ಳಿ ಗ್ರಾಮ,
ಹಳಸೇ ಅಂಚೆ, ಕಸಬಾ ಹೋಬಳಿ,
ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**ವಿರುದ್ಧ**

**ಆರೋಪಿ** ಃ ಶ್ರೀ ಮಂಜುನಾಥ.ಎಂ.ಡಿ,
ಬಿನ್ ದಿಃ ದಿಬ್ಬಯ್ಯ,
ವಯಸ್ಸು ಸುಮಾರು 55 ವರ್ಷ,
ವಾಸಃ ಮಡ್ಡಿಕೆರೆ ಗ್ರಾಮ,
ಬಿಳ್ಳೂರು ಅಂಚೆ, ಮೂಡಿಗೆರೆ ತಾಲ್ಲೂಕು
ಚಿಕ್ಕಮಗಳೂರು ಜಿಲ್ಲೆ.

**ಆಪಾದನೆಯ ಸಾರಾಂಶ**

ನಾನು ಶ್ರೀ ಸಚಿನ್.ಡಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಫಿರ್ಯಾದಿಯನ್ನು ಸಂಪರ್ಕಿಸಿ, ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಅವರಿಂದ 1,25,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಸಾಲದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ:005679, ದಿನಾಂಕ 04.12.2023, ರೂ.1,25,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು

ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 16.12.2023 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ದಿನಾಂಕ 05.04.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd**/-

ಮೂಡಿಗೆರೆ
ದಿನಾಂಕಃ 05.04.2024

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.